ಆ) ಹಳೆಯ ಬಸ್ ಸ್ಟ್ಯಾಂಡಿನಲ್ಲಿಯೇ ವರ್ಕ್‌ಶಾಪ್ ಇದ್ದು ಸ್ಥಳದ ಅಭಾವವಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ;

ಇ) ಈ ಕಾರ್ಯಗಾರವನ್ನು ನಗರದ ಹೊರಗಡೆ ಸ್ಥಳಾಂತರಿಸಲು ಕೆ.ಎಸ್.ಆರ್.ಟಿ.ಸಿ. ಇಚ್ಛಿಸಿದ್ದು, ಅದಕ್ಕಾಗಿ ಲಭ್ಯವಿರುವ ಜಮೀನಿನಲ್ಲಿ ಸುಮಾರು 3 ಎಕರೆ ಕೆ.ಎಸ್.ಆರ್.ಟಿ.ಸಿ.ಗೆ ಕೊಡಬಹುದೇ?

ಶ್ರೀ ಆರ್. ಅಶೋಕ್ (ಗೃಹ ಮತ್ತು ಸಾರಿಗೆ ಸಚಿವರು):–

ಅ) ಹೌದು.

ಆ) ಹೌದು.

ಇ) ನಿವೇಶನವು ಸಂಸ್ಥೆಗೆ ಲಭ್ಯವಾದಲ್ಲಿ ಡಿಪೋ ವರ್ಕ್‌ಶಾಪ್‌ನ್ನು ನಗರದ ಹೊರಗಡೆ ಸ್ಥಳಾಂತರಿಸಲು ಪರಿಶೀಲಿಸಲಾಗುವುದು.

ಸಾವಳಗಿ ಹೋಬಳಿ ಕೇಂದ್ರಕ್ಕೆ ಬಸ್ ತಂಗುದಾಣ ನಿರ್ಮಾಣ

186 (332) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬರಾವ್ (ಜಮಖಂಡಿ):– ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಜಮಖಂಡಿ ತಾಲ್ಲೂಕಿನ ಸಾವಳಗಿ ಹೋಬಳಿ ಕೇಂದ್ರಕ್ಕೆ ಬಸ್ ನಿಲ್ದಾಣದ ಅವಶ್ಯಕತೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಆ) ಅದಕ್ಕೆ ಬೇಕಾದ ನಿವೇಶನವನ್ನು ಕಂದಾಯ ಇಲಾಖೆಯಿಂದ ಕೊಡಲಾಗಿದೆಯೆ;

ಇ) ಪ್ರಸಕ್ತ ವರ್ಷದಲ್ಲಿಯೆ ಮಂಜೂರಾತಿ ನೀಡಿ ಕಟ್ಟಡ ಕಾರ್ಯ ಪ್ರಾರಂಭಿಸಲಾಗುವುದೇ?

ಶ್ರೀ ಆರ್. ಅಶೋಕ್ (ಗೃಹ ಮತ್ತು ಸಾರಿಗೆ ಸಚಿವರು):–

ಅ) ಹೌದು.

ಆ) ಇಲ್ಲ.

ಇ) ಸೂಕ್ತ ನಿವೇಶನವನ್ನು ಸಂಸ್ಥೆಯ ವಶಕ್ಕೆ ಪಡೆದ ನಂತರ ಕಟ್ಟಡ ಕಾರ್ಯ ಪ್ರಾರಂಭಿಸಲು ಕ್ರಮ ಜರುಗಿಸಲಾಗುವುದು.

ಖಾಸಗಿ ಬಸ್‌ಗಳ ಸಂಚಾರದಿಂದ ಸರ್ಕಾರಕ್ಕೆ ನಷ್ಟ

189 (214) ಶ್ರೀ ಎಂ.ಟಿ. ಕೃಷ್ಣಪ್ಪ (ತುರುವೇಕೆರೆ):– ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–